# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 687 |
| ವಿಧಾನ ಪರಿಷತ್ತು ಸದಸ್ಯರ ಹೆಸರು | : | ಡಾ\|\| ಉಮಾಶ್ರೀ (ನಾಮನಿರ್ದೇಶಿತರು) |
| ಉತ್ತರಿಸಬೇಕಾದ ದಿನಾಂಕ | : | 18.08.2025 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ರಾಜ್ಯದಲ್ಲಿ BPL ಪಡಿತರ ಚೀಟಿಯನ್ನು ಹೊಂದಿರುವ ಕುಟುಂಬಗಳೆಷ್ಟು;</td><td>ರಾಜ್ಯದಲ್ಲಿ ಈ ಕೆಳಕಂಡಂತೆ ಆದ್ಯತಾ /ಅಂತ್ಯೋದಯ ಪಡಿತರ ಚೀಟಿಗಳು ಚಾಲ್ತಿಯಲ್ಲಿರುತ್ತದೆ.
<table>
<tr><th>ವಿವರ</th><th>ಪಡಿತರ ಚೀಟಿ ಸಂಖ್ಯೆ</th><th>ಫಲಾನುಭವಿಗಳ ಸಂಖ್ಯೆ</th></tr>
<tr><td>ಅಂತ್ಯೋದಯ ಪಡಿತರ ಚೀಟಿ</td><td>10,76,942</td><td>43,96,248</td></tr>
<tr><td>ಆದ್ಯತಾ ಪಡಿತರ ಚೀಟಿ</td><td>1,17,31,508</td><td>4,09,75,963</td></tr>
<tr><td>ಒಟ್ಟು</td><td>1,28,08,450</td><td>4,53,72,211</td></tr>
</table>
</td></tr>
<tr><td>ಆ</td><td>ಅನ್ನಭಾಗ್ಯ ಯೋಜನೆಯಡಿ ಪಡಿತರ ಚೀಟಿದಾರರಿಗೆ ಪ್ರತಿ ತಿಂಗಳು ಎಷ್ಟು ಕೆ.ಜಿ. ಅಕ್ಕಿಯನ್ನು ವಿತರಿಸಲಾಗಿದೆ;</td><td>ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ವತಿಯಿಂದ ಪಡಿತರ ಚೀಟಿದಾರರಿಗೆ ನೀಡಲಾಗುತ್ತಿರುವ ಆಹಾರ ಧಾನ್ಯದ ವಿವರ ಕೆಳಗಿನಂತಿದೆ.
<table>
<tr><th>ಚೀಟಿ ವಿಧ</th><th>ಪ್ರಮಾಣ</th><th>ದರ</th></tr>
<tr><td>ಅಂತ್ಯೋದಯ ಅನ್ನಯೋಜನೆ (AAY)</td><td>ಪ್ರತಿ ಕಾರ್ಡಿಗೆ 35 ಕೆ.ಜಿ ಆಹಾರ ಧಾನ್ಯಗಳನ್ನು ಪ್ರತಿ ಮಾಹೆ ವಿತರಣೆ ಮಾಡಲಾಗುತ್ತಿದ್ದು, ಪ್ರಸ್ತುತ 14 ಕೆ.ಜಿ ಅಕ್ಕಿ ಮತ್ತು ಪ್ರಾದೇಶಿಕ ಆಹಾರ ಪದ್ಧತಿಗನುಗುಣವಾಗಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಖರೀದಿಸಿದ 21 ಕೆ.ಜಿ ರಾಗಿ/ಜೋಳವನ್ನು ಹಂಚಿಕೆ ಮಾಡಲಾಗುತ್ತಿದೆ.</td><td>ಉಚಿತ</td></tr>
<tr><td>ಆದ್ಯತಾ ಕುಟುಂಬ (PHH)</td><td>ಕೇಂದ್ರ ವ್ಯಾಪ್ತಿಯ ಆದ್ಯತಾ ಪಡಿತರ ಚೀಟಿಯ ಪ್ರತಿ ಸದಸ್ಯರಿಗೆ ಪ್ರತಿ ಮಾಹೆ 5 ಕೆ.ಜಿ ಆಹಾರ ಧಾನ್ಯಗಳನ್ನು ವಿತರಣೆ ಮಾಡಲಾಗುತ್ತಿದ್ದು, ಪ್ರಸ್ತುತ 2 ಕೆ.ಜಿ ಅಕ್ಕಿ ಮತ್ತು ಪ್ರಾದೇಶಿಕ ಆಹಾರ ಪದ್ಧತಿಗನುಗುಣವಾಗಿ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಖರೀದಿಸಿದ 03 ಕೆ.ಜಿ ರಾಗಿ/ಜೋಳವನ್ನು ಹಂಚಿಕೆ ಮಾಡಲಾಗುತ್ತಿದೆ. ರಾಜ್ಯ ವ್ಯಾಪ್ತಿಯ ಆದ್ಯತ ಪಡಿತರ ಚೀಟಿಯ ಪ್ರತಿ ಸದಸ್ಯರಿಗೆ ಪ್ರತಿ ಮಾಹೆ 5 ಕೆ.ಜಿ ಅಕ್ಕಿಯನ್ನು ಹಂಚಿಕೆ ಮಾಡಲಾಗುತ್ತಿದೆ. ಸರ್ಕಾರದ ಆದೇಶ ಸಂಖ್ಯೆ: ಆನಾಸ 199 ಡಿಆರ್ಎ 2023</td><td>ಉಚಿತ</td></tr>
</table>
</td></tr>
</table>

| | | | |
|---|---|---|---|
| | | ದಿನಾಂಕ:19-02-2025 ರಂತೆ ರಾಜ್ಯದಲ್ಲಿರುವ ಅಂತ್ಯೋದಯ ಅನ್ನ ಯೋಜನೆ (AAY) ಮತ್ತು ಆದ್ಯತಾ ಪಡಿತರ ಚೀಟಿ (PHH) ಪ್ರತಿ ಫಲಾನುಭವಿಗೆ ಪ್ರತಿ ತಿಂಗಳು ಪಡಿತರ ಚೀಟಿಯಲ್ಲಿನ ಕುಟುಂಬದ ಮುಖ್ಯಸ್ಥರ ಬ್ಯಾಂಕ್ ಖಾತೆಗೆ ನೇರ ನಗದು ವರ್ಗಾವಣೆ (DBT) ಮುಖಾಂತರ ಹಣವನ್ನು ವರ್ಗಾಯಿಸುವ ಪ್ರಕ್ರಿಯೆಯ ಬದಲಾಗಿ ಫೆಬ್ರವರಿ 2025 ರ ಮಾಹೆಯಿಂದ ಅರ್ಹ ಪ್ರತಿ ಫಲಾನುಭವಿಗೆ 05 ಕೆ.ಜಿ ಅಕ್ಕಿಯನ್ನು ವಿತರಿಸಲಾಗುತ್ತಿದೆ. | |
| ಇ | ಕೆಲವು ಕುಟುಂಬಗಳು ಪಡೆಯುತ್ತಿರುವ ಅಕ್ಕಿ ಪ್ರಮಾಣವು ತಿಂಗಳ ಬಳಕೆಯಾಗಿ ಹೆಚ್ಚುವರಿಯಾಗಿ ಉಳಿಯುತ್ತಿರುವುದು ಹಾಗೂ ಕಾಳಸಂತೆಯಲ್ಲಿ ಈ ಅಕ್ಕಿಯು ಮಾರಾಟ ಆಗುತ್ತಿರುವ ಸರ್ಕಾರದ ಗಮನಕ್ಕೆ ಬಂದಿದೆಯೇ; | ಅಕ್ಕಿ ಪ್ರಮಾಣ ಹೆಚ್ಚುವರಿಯಾಗಿ ಉಳಿಯುತ್ತಿರುವ ಪ್ರಕರಣಗಳು ವರದಿಯಾಗಿರುವುದಿಲ್ಲ. | |
| ಈ | ರಾಜ್ಯದಲ್ಲಿ ಅನ್ನಭಾಗ್ಯ ಯೋಜನೆಯಡಿಯಲ್ಲಿ ಅಕ್ಕಿಯನ್ನು ಕಾಳಸಂತೆಯಲ್ಲಿ ಮಾರಾಟ ಆಗುತ್ತಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಈ ಅಕ್ಕಿಯು ದುರುಪಯೋಗವಾಗದಂತೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಅಕ್ಕಿಯು ಕಾಳಸಂತೆಯಲ್ಲಿ ಮಾರಾಟವಾಗುತ್ತಿರುವ ಬಗ್ಗೆ 2024-25 ನೇ ಸಾಲಿನಲ್ಲಿ 402 ಪ್ರಕರಣಗಳು ಹಾಗೂ 2025-26 ನೇ ಸಾಲಿನ ಜೂನ್ ಮಾಹೆಯ ಅಂತ್ಯದವರೆಗೆ 188 ಪ್ರಕರಣಗಳು ದಾಖಲಾಗಿರುತ್ತವೆ. ಸಾರ್ವಜನಿಕ ವಿತರಣಾ ಪದ್ಧತಿ (PDS) ಅಡಿಯಲ್ಲಿ ಅಕ್ಕಿಯ ದುರ್ಬಳಕೆಯನ್ನು ತಡೆಗಟ್ಟಲು ಈ ಕೆಳಗಿನಂತೆ ಕ್ರಮವಹಿಸಲಾಗುತ್ತಿದೆ.<br>➢ ಆಧಾರ್ ಆಧಾರಿತ ಬಯೋ ಮೆಟ್ರಿಕ್ ಪಡಿತರ ವಿತರಣೆ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿರುತ್ತದೆ.<br>➢ ಇಲಾಖೆಯ ಅಧಿಕಾರಿಗಳು ಹಾಗೂ ಕಾರ್ಯನಿರ್ವಾಹಕ ಸಿಬ್ಬಂದಿಗಳಿಗೆ ಕಾಲ ಕಾಲಕ್ಕೆ ಮೇಲ್ವಿಚಾರಣೆ ಮಾಡುವಂತೆ ನಿರ್ದೇಶನ ನೀಡಿ ಅಗತ್ಯ ವಸ್ತುಗಳ ಕಾಯ್ದೆ 1955 ರಡಿ ಕ್ರಿಮಿನಲ್ ಪ್ರಕರಣ ದಾಖಲಿಸಲಾಗಿರುತ್ತದೆ.<br>➢ ಪಡಿತರ ಚೀಟಿದಾರರು ಪಡಿತರ ಅಕ್ಕಿಯನ್ನು ದುರ್ಬಳಕೆ ಮಾಡಿಕೊಂಡ ಪ್ರಕರಣಗಳು ಕಂಡುಬಂದಲ್ಲಿ ಸದರಿ ಪಡಿತರ ಚೀಟಿಗಳನ್ನು ರದ್ದುಪಡಿಸಿ ಅಂತಹವರ ವಿರುದ್ಧ ನಿಯಾಮಾನುಸಾರ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ. | |

| | | |
|---|---|---|
| | | ➤ ನ್ಯಾಯಬೆಲೆ ಅಂಗಡಿ, ತಾಲ್ಲೂಕು, ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಜಾಗೃತಿ ಸಮಿತಿಗಳನ್ನು ರಚಿಸಿ ಪಡಿತರ ವಿತರಣೆಯನ್ನು ಪರಿಶೀಲಿಸಲಾಗುತ್ತಿದೆ.<br>➤ ಪ್ರತಿ ಮಾಹೆ ನ್ಯಾಯಬೆಲೆ ಅಂಗಡಿ ಮಟ್ಟದಲ್ಲಿ ಆಹಾರ ಅದಾಲತ್ ಗಳನ್ನು ನಡೆಸಿ ಪಡಿತರ ಚೀಟಿದಾರರಿಗೆ ಪಡಿತರ ವಿತರಣೆ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ.<br>➤ ರಾಜ್ಯ ಮಟ್ಟದಲ್ಲಿ ಆಹಾರ ಜಾಗೃತ ಧಳ ರಚಿಸಿ ಅಕ್ರಮಗಳ ಬಗ್ಗೆ ನಿಯಮಾನುಸಾರ ಕ್ರಮವಹಿಸಲಾಗುತ್ತಿದೆ. |

ಇ- ಆನಾಸ 221 ಡಿಆರ್ಎ 2025

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು